ಇವುಗಳಲ್ಲಿ ಮುಖ್ಯವಾಗಿ 1986-87ರಲ್ಲಿ ಜಾರಿಗೆ ತಂದ ವಿದ್ಯಾವಿಕಾಸ ಕಾರ್ಯಕ್ರಮದಡಿಯಲ್ಲಿ ಮಕ್ಕಳಿಗೆ ಉಚಿತ ಪಠ್ಯಪುಸ್ತಕಗಳ ವಿತರಣೆ ಹಾಗೂ ಉಚಿತ ಸಮವಸ್ತ್ರ ವಿತರಣೆ ಇದಲ್ಲದೇ ಅರ್ಹ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಉಪಹಾರ ನೀಡುವ ಕಾರ್ಯಕ್ರಮವನ್ನು ಜಾರಿಗೆ ತರಲಾಗಿದೆ.

ಜೊತೆಗೆ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸಲಾಗಿದೆ.

ವಿಷಯ:- ಶಿಗ್ಗಾಂವ ತಾಲ್ಲೂಕು ಸ್ಟೇಡಿಯಂ ಕಟ್ಟಡ ಪ್ರಾಂಭಿಸಲು ಹಣ ಬಿಡುಗಡೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 286(344)

ಶ್ರೀ ಮಂಜುನಾಥ ಸಿ.ಕುನ್ನೂರ್(ಶಿಗ್ಗಾಂವ) :- ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಶಿಗ್ಗಾಂವ್ ತಾಲ್ಲೂಕು ಸ್ಟೇಡಿಯಂ ಕೆಲಸ ಎಂದು ಪ್ರಾರಂಭ ಮಾಡಲಾಗುವುದು;

ಆ) ಸದರಿ ಕಾಮಗಾರಿಗೆ ರಾಜ್ಯ ಸರ್ಕಾರದಿಂದ ಹಣ ಬಿಡುಗಡೆ ಮಾಡಲಾಗುವುದೆ;

ಇ) ಹಾಗಿದ್ದಲ್ಲಿ, 1994-95ನೇ ಸಾಲಿನಲ್ಲಿ ರಾಜ್ಯ ಸರ್ಕಾರದಿಂದ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ?

ಶ್ರೀ ಅಜಯಕುಮಾರ್ ಸರ್‌ನಾಯಕ್(ಯುವಜನ ಸೇವಾ ಮತ್ತು ಕ್ರೀಡಾ ಸಚಿವರು):-

ಅ) 1995ನೇ ಸಾಲಿನಲ್ಲಿ.

ಆ) ರಾಜ್ಯ ಸರ್ಕಾರದಿಂದ ಯಾವುದೇ ಹಣ ಬಿಡುಗಡೆ ಮಾಡಿರುವುದಿಲ್ಲ. ಜಿಲ್ಲಾ ಪಂಚಾಯತ್‌ನಿಂದ ಹಣ ಬಿಡುಗಡೆ ಮಾಡಲಾಗುತ್ತದೆ.

ಇ) 1994-95ನೇ ಸಾಲಿನಲ್ಲಿ ರೂ.2.00 ಲಕ್ಷಗಳನ್ನು ಜಿಲ್ಲಾ ಪಂಚಾಯತ್‌ನಿಂದ ಹಣ ಬಿಡುಗಡೆ ಮಾಡಲು ಸರ್ಕಾರವು ಅನುಮತಿ ನೀಡಿದೆ.

ವಿಷಯ:- ಹಂಪಿಯ ಕನ್ನಡ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 287(579)

ಶ್ರೀ ಜಿ.ಶಂಕರಗೌಡ(ಹೊಸಪೇಟೆ) :- ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳನ್ನು ದಯವಿಟ್ಟು ಉತ್ತರಿಸುವರೆ.

ಅ) ದಿನಾಂಕ 25-2-1995 ರಂದು ನಡೆದ ಹಂಪಿಯ ಕನ್ನಡ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭಕ್ಕೆ ಸ್ಥಳೀಯ ಶಾಸಕರನ್ನು ಆಹ್ವಾನಿಸದೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ:

ಆ) ಹಾಗಿದ್ದಲ್ಲಿ, ಶಿಷ್ಟಾಚಾರದ ನಿಯಮದಂತೆ ಸ್ಥಳೀಯ ಶಾಸಕರನ್ನು ಆಹ್ವಾನಿಸದಿರಲು ಕಾರಣಗಳೇನು ಹಾಗೂ ಇದಕ್ಕೆ ಕಾರಣರಾದವರ ಮೇಲೆ ಸರ್ಕಾರದವರು ಕೈಗೊಂಡಿರುವ ಕ್ರಮವೇನು?

ಶ್ರೀ ಡಿ.ಮಂಜುನಾಥ್(ಉನ್ನತ ಶಿಕ್ಷಣ ಸಚಿವರು):-